**All India Radio: Bangalore**
**Regional Bulletin In Kannada**
**15.04.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**15.04.2025 / 2.30 p.m.**
**<><><><>**

ಮುಖ್ಯಾಂಶಗಳು

1. ಹೊನ್ನಾವರ ತಾಲೂಕಿನ ಕಾಸರಕೋಡ ಖಾಸಗಿ ಬಂದರು ಯೋಜನೆ ಕೈಬಿಡುವಂತೆ ಮುಖ್ಯಮಂತ್ರಿಗೆ ರಾಷ್ಟ್ರೀಯ ಮೀನುಗಾರರ ಸಂಘ ಮನವಿ ಸಲ್ಲಿಕೆ
2. ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಾಜ್ಯಾದ್ಯಂತ ಅನಿರ್ಧಿಷ್ಟವಾದಿ ಲಾರಿ ಮುಷ್ಕರ
3. ಜಾತಿಗಣತಿ ವರದಿ ಜನರನ್ನು ಬೇರೆಡೆಗೆ ಸೆಳೆಯುವ ಯತ್ನ - ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪ
4. ರಾಜ್ಯಾದ್ಯಂತ ನಾಳೆ ಸಾಮಾನ್ಯ ಪ್ರವೇಶ ಪರೀಕ್ಷೆ ; ವೆಬ್‌ಕಾಸ್ಟಿಂಗ್ ಮೂಲಕ ಪರೀಕ್ಷಾ ಕೇಂದ್ರಗಳಲ್ಲಿ ಕಟ್ಟೆಚ್ಚರ
5. ಬೆಂಗಳೂರಿನಲ್ಲಿಂದು ವೇವ್ಸ್ ರಾಜ್ಯಮಟ್ಟದ ಅರ್ಹತಾ ಸುತ್ತಿನ ಸ್ಪರ್ಧೆ

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿ ಇಂದು ರಾಷ್ಟ್ರೀಯ ಮೀನುಗಾರರ ಸಂಘಟನೆ ಮುಖಂಡರ ಜೊತೆ ಸಭೆ ನಡೆಸಿದರು. ಈ ವೇಳೆ ಮೀನುಗಾರರ ಸಂಘಟನೆ ಉತ್ತರಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನ ಕಾಸರಕೋಡ ಟೊಂಕದ ಉದ್ದೇಶಿತ ಖಾಸಗಿ ವಾಹಿನಿ ಬಂದರು ಯೋಜನೆಯನ್ನು ಕೈಬಿಡುವಂತೆ ಮನವಿ ಸಲ್ಲಿಸಿತು. ಅಲ್ಲದೇ ಈ ಯೋಜನೆಗಾಗಿ ಪರಿಸರ ಸೂಕ್ಷ್ಮ ಕಡಲತೀರದ ೫ ಕಿಲೋಮೀಟರ್ ಉದ್ದದ ಮೀನುಗಾರರ ವಸತಿ ನೆಲೆಯಲ್ಲಿ ಚತುಷ್ಪತ ರಸ್ತೆ ಮತ್ತು ರೈಲು ಮಾರ್ಗದ ನಿರ್ಮಾಣ ಯೋಜನೆಯನ್ನು ಕೈಬಿಡಬೇಕು ಎಂದು ಮನವಿ ಮಾಡಿದೆ. ಮೀನುಗಾರರ ಹಾಗೂ ಬಂದರು ವಿರೋಧಿ ಹೋರಾಟಗಾರರ ಮೇಲೆ ಪೊಲೀಸರು ದಾಖಲಿಸಿರುವ ಪ್ರಕರಣಗಳನ್ನು ಕೈಬಿಡುವಂತೆ ಒತ್ತಾಯಿಸಿದ್ದಾರೆ.

<><><><>

ಡೀಸೆಲ್ ದರ ಹೆಚ್ಚಳವನ್ನು ರಾಜ್ಯ ಸರ್ಕಾರ ಹಿಂಪಡೆಯಬೇಕು, ಟೋಲ್ ಶುಲ್ಕ ಕಡಿಮೆ ಮಾಡಬೇಕು, ಆರ್‌ಟಿಒ ಗಡಿ ಚೆಕ್‌ಪೋಸ್ಟ್ ತೆಗೆಯಬೇಕು, ಎಫ್‌ಸಿ ಶುಲ್ಕ ಕಡಿಮೆ ಮಾಡಬೇಕು, ಸರಕು ಸಾಗಾಣೆ ವಾಹನ ನಿರ್ಬಂಧ ಹಿಂಪಡೆಯಬೇಕು ಎಂಬ ನಾಲ್ಕು ಪ್ರಮುಖ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮಧ್ಯರಾತ್ರಿಯಿಂದ ರಾಜ್ಯದ ವಿವಿಧೆಡೆಗಳಲ್ಲಿ ಅನಿರ್ದಿಷ್ಟಾವಧಿ ಲಾರಿ ಮುಷ್ಕರ ಆರಂಭಗೊಂಡಿದೆ. ಬೆಂಗಳೂರು ಗ್ರಾಮಾಂತರ, ಮೈಸೂರು ಸೇರಿದಂತೆ ಪ್ರಮುಖ ನಗರಗಳಲ್ಲಿ ಲಾರಿ ಸಂಚಾರ ಭಾಗಶಃ ಸ್ಥಗಿತಗೊಂಡಿದೆ. ಕರ್ನಾಟಕ ರಾಜ್ಯ ಲಾರಿ ಮಾಲೀಕರ ಸಂಘಟನೆ ಕರೆ ನೀಡಿರುವ ಮುಷ್ಕರಕ್ಕೆ ದೇಶದ ೬೦ ವಿವಿಧ ಸಂಘಟನೆಗಳು ತಮ್ಮ ಬೆಂಬಲ ಸೂಚಿಸಿವೆ. ಸುಮಾರು ೬ ಲಕ್ಷ ಲಾರಿಗಳ ಸಂಚಾರ ಸ್ಥಗಿತಗೊಂಡಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

<><><>

ಜಾತಿಗಣತಿ ವರದಿ, ಜನರ ಗಮನವನ್ನು ಬೇರೆಡೆಗೆ ಸೆಳೆಯುವ ಪ್ರಯತ್ನ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಕಾಂತರಾಜ್ ಆಯೋಗದ ವರದಿ ಅವೈಜ್ಞಾನಿಕ, ಅಪೂರ್ಣ, ಅಪ್ರಸ್ತುತ ಎಂದು ಬಹುತೇಕರ ಅಭಿಪ್ರಾಯ ಎಂದು ಹೇಳಿದ್ದಾರೆ. ಸಮಾಜದ ತಳಸಮುದಾಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ದಾಳವಾಗಿ ಬಳಸುತ್ತಿದ್ದಾರೆ ಇದಕ್ಕೆ ತಮ್ಮ ವಿರೋಧವಿದೆ ಎಂದರು. ಜಾತಿಗಣತಿ ವರದಿ ಸ್ವೀಕರಿಸದಂತೆ ಒಕ್ಕಲಿಗರ ಸಂಘ ಮನವಿ ಸಲ್ಲಿಸಿದೆ. ಇದಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಹಿ ಮಾಡಿದ್ದಾರೆ. ತಮ್ಮದೇ ಪಕ್ಷದ ಹಿರಿಯ ನಾಯಕರಾದ ಶಾಮನೂರು ಶಿವಶಂಕರಪ್ಪನವರು ಹಾಗೂ ಮಠಾಧೀಶರು ಈಗಾಗಲೇ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಹೀಗಿದ್ದರೂ ಸಂಪುಟ ಸಭೆಯಲ್ಲಿ ವರದಿ ಬಗ್ಗೆ ಚರ್ಚೆ ನಡೆಸಲು ನಿರ್ಧಾರ ತೆಗೆದುಕೊಂಡಿರುವುದನ್ನು ಆರ್. ಅಶೋಕ ಪ್ರಶ್ನಿಸಿದ್ದಾರೆ.

<><><>

ಇಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ವ್ಯಾಸಂಗಗಳ ಪ್ರವೇಶಕ್ಕೆ ನಾಳೆ ಮತ್ತು ನಾಡಿದ್ದು, ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಯಲಿದೆ ಎಂದು ಕನ್ನಡ ಪರೀಕ್ಷಾ ಪ್ರಾಧಿಕಾರ ತಿಳಿಸಿದೆ. ನಾಳೆ ಭೌತವಿಜ್ಞಾನ, ರಾಸಾಯನ ಶಾಸ್ತ್ರ, ನಾಡಿದ್ದು ಗಣಿತ ಹಾಗೂ ಜೀವ ವಿಜ್ಞಾನ ಪರೀಕ್ಷೆಗಳು ನಡೆಯಲಿವೆ. ಪರೀಕ್ಷಾ ಅಕ್ರಮಗಳನ್ನು ತಡೆಯಲು ಸಿಸಿ ಟಿವಿ ಅಳವಡಿಸಲಾಗಿದೆ. ವೆಬ್ ಕಾಸ್ಟಿಂಗ್ ಮೂಲಕ ಎಲ್ಲ ೭೭೫ ಪರೀಕ್ಷಾ ಕೇಂದ್ರಗಳ ಮೇಲೆ ನಿಗಾ ಇಡುವ ವ್ಯವಸ್ಥೆ ಮಾಡಲಾಗಿದೆ. ಅಭ್ಯರ್ಥಿಯ ಚಹರೆ ಮತ್ತು ಪ್ರವೇಶ ಪತ್ರದಲ್ಲಿನ ಕ್ಯೂಆರ್‌ಕೋಡ್ ಮೂಲಕ ಅಭ್ಯರ್ಥಿಯ ಗುರುತು ಪರಿಶೀಲನೆ ಮಾಡಲಾಗುತ್ತದೆ. ಅಭ್ಯರ್ಥಿಗಳು ಕನಿಷ್ಠ ಒಂದೂವರೆ ಗಂಟೆ ಮುಂಚಿತವಾಗಿ ಪರೀಕ್ಷಾ ಕೇಂದ್ರಕ್ಕೆ ಆಗಮಿಸಬೇಕು ಎಂದು ಪರೀಕ್ಷಾ ಪ್ರಾಧಿಕಾರ ಸಲಹೆ ನೀಡಿದೆ.

<><><>

ತೋಟಗಾರಿಕಾ ಬೆಳೆಗಳ ಉತ್ತಮ ತಳಿಗಳನ್ನು ಪರಿಚಯಿಸಿದ ತೋಟಗಾರಿಕಾ ಸಂಶೋಧನಾ ಸಂಸ್ಥೆ - ಐಸಿಎಆರ್ ಮತ್ತು ಬೆಂಗಳೂರಿನಲ್ಲಿರುವ ಭಾರತೀಯ ತೋಟಗಾರಿಕಾ ಸಂಶೋಧನಾ ಕೇಂದ್ರ ಹೆಸರಘಟ್ಟ-ಐಐಎಚ್‌ಆರ್ ನಡೆಸಿದ ವಿನೂತನ ಪ್ರಯತ್ನಗಳ ಬಗ್ಗೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್ ಶ್ಲಾಘಿಸಿದ್ದಾರೆ. ಬೆಂಗಳೂರಿನ ವಿಜ್ಞಾನಿ ಡಾ. ಜಿ. ಕರುಣಾಕರನ್ ಅವರೊಂದಿಗೆ ಏಪ್ರಿಲ್ ೧೩ ರಂದು ಚರ್ಚೆ ನಡೆಸಿದ ಸಚಿವರು ಕಮಲಮ್ ಎಂಬ ಲಾಭದಾಯಕ ಹಣ್ಣಿನ ಬೆಳೆ ಕುರಿತಂತೆ ಮಾಹಿತಿ ಪಡೆದುಕೊಂಡಿದ್ದಾರೆ. ಗುಲಾಬಿ ಹಾಗೂ ಬಿಳಿ ಬಣ್ಣದ ಈ ಹಣ್ಣುಗಳು ರೈತರ ಆದಾಯವನ್ನು ದ್ವಿಗುಣಗೊಳಿಸಬಲ್ಲವು. ಹಲಸಿನ ಹಣ್ಣಿನ ಕೆಂಪು ಪ್ರಬೇಧಗಳಾದ ಸಿದ್ದು ಮತ್ತು ಶಂಕರ ಸಿಹಿ ಹಲಸಿನ ತಳಿಗಳನ್ನು ಐಐಎಚ್‌ಆರ್ ಅಭಿವೃದ್ಧಿಪಡಿಸಿದೆ. ಇಂದು ೧ ಸಾವಿರದ ೫೦೦ಕ್ಕೂ ಹೆಚ್ಚು ಎಕರೆಗಳಲ್ಲಿ ಇದನ್ನು ಬೆಳೆಯಲಾಗಿದೆ. ತೋಟಗಾರಿಕಾ ಸಂಸ್ಥೆ ಮತ್ತು ರೈತರ ನಡುವಿನ ಲಾಭ ಹಂಚಿಕೆ ಮಾದರಿಯಡಿಯಲ್ಲಿ ಹಲಸಿನ ಹಣ್ಣು ಬೆಳೆದ ರೈತರು ಸುಮಾರು ೫೦ ಲಕ್ಷ ಲಾಭಗಳಿಸಿದ್ದಾರೆ. ಇದೇ ವೇಳೆ ಅವಕಾಡೊ ಹಣ್ಣಿನ ಎರಡು ಪ್ರಬೇಧಗಳಾದ ಅರ್ಕಾ ಸುಪ್ರಿಂ ಹಾಗೂ ಅರ್ಕಾ ರವಿ ಅಭಿವೃದ್ಧಿಪಡಿಸಲಾಗಿದೆ ಎಂದು ಸಚಿವರಿಗೆ ತಿಳಿಸಲಾಯಿತು.

<><><>

ವೇವ್ಸ್ ಆನಿಮೆ ಮತ್ತು ಮಾಂಗಾ ಸ್ಪರ್ಧೆಯ ರಾಜ್ಯ ಮಟ್ಟದ ಅರ್ಹತಾ ಸುತ್ತಿನ ಸ್ಪರ್ಧಿಗಳನ್ನು ಆಯ್ಕೆ ಮಾಡಲು, ಭಾರತೀಯ ಸಂವಹನ ಮತ್ತು ಮನರಂಜನಾ ಸಂಘ, ಬೆಂಗಳೂರಿನ ಬಸವನಗುಡಿಯ ವಿವಿಎಸ್ ಪದವಿ ಕಾಲೇಜಿನಲ್ಲಿಂದು ಡಬ್ಲ್ಯೂಎಎಂ ಅಂದರೆ ವೇವ್ಸ್ ಅನಿಮೆ ಮತ್ತು ಮಂಗಾ ಸ್ಪರ್ಧೆ ಆಯೋಜಿಸುತ್ತಿದೆ. ೧೨೧ ಸ್ಪರ್ಧಿಗಳು ಭಾಗವಹಿಸಿದ್ದಾರೆ. ಡಬ್ಲ್ಯೂಎಎಂ ಆನಿಮೆ ಮತ್ತು ಮಾಂಗಾ ಎಂಬುದು ಜಪಾನ್ ಶೈಲಿಯ ಅನಿಮೇಶನ್ ಮತ್ತು ಕಾಮಿಕ್ಸ್ ಕಲೆಯಾಗಿದೆ. ಈ ಕುರಿತಂತೆ ಆಕಾಶವಾಣಿಯೊಂದಿಗೆ ಭಾರತೀಯ ಸಂವಹನ ಮತ್ತು ಮನರಂಜನ ಸಂಘದ ಸದಸ್ಯೆ ಧಾರುಣಿ ಮಾಹಿತಿ ಹಂಚಿಕೊಂಡಿದ್ದಾರೆ.

ಧ್ವನಿ : ಧಾರುಣಿ

ಅರ್ಹತಾ ಸುತ್ತಿನ ಸ್ಪರ್ಧಿ ಮುಂಬೈನಲ್ಲಿ ವೇವ್ಸ್ - ೨೦೨೫ರ ವೇಳೆ ನಡೆಯುವ ಡಬ್ಲ್ಯೂಎಎಂ ರಾಷ್ಟ್ರೀಯ ಅಂತಿಮ ಸುತ್ತಿನಲ್ಲಿ ಭಾಗವಹಿಸಲಿದ್ದಾರೆ. ಈ ಕುರಿತು ಮಾತನಾಡಿರುವ ಭಾರತೀಯ ಸಂವಹನ ಮತ್ತು ಮನರಂಜನಾ ಸಂಘದ ಕಾರ್ಯದರ್ಶಿ ಅಂಕುರ್ ಭಾಸಿನ್, ಬೆಂಗಳೂರು ನಾವೀನ್ಯತೆ ಮತ್ತು ಸೃಜನಶೀಲತೆ ಕೇಂದ್ರವಾಗಿದ್ದು, ಇಲ್ಲಿಂದ ಹೊರಹೊಮ್ಮುವ ಕ್ರಿಯಾತ್ಮಕ ಡಿಜಿಟಲ್ ಕಲೆಯನ್ನು ವೀಕ್ಷಿಸಲು ಉತ್ಸುಕರಾಗಿದ್ದೇವೆ ಎಂದು ತಿಳಿಸಿದ್ದಾರೆ. ಗ್ರ್ಯಾಂಡ್ ಫಿನಾಲೆಗೆ ಮೊದಲು, ರಾಜ್ಯ ಮಟ್ಟದ ಅಂತಿಮ ಅರ್ಹತಾ ಸುತ್ತಿನ ಸ್ಪರ್ಧೆ ಬೆಂಗಳೂರಿನಲ್ಲಿ ನಡೆಯುತ್ತಿದೆ. ಈ ಸ್ಪರ್ಧೆ ಭಾರತೀಯ ಡಿಜಿಟಲ್ ಕುಶಲಕರ್ಮಿಗಳಿಗೆ ದೊಡ್ಡ ಕನಸುಗಳನ್ನು ಕಾಣಲು, ಸ್ಪರ್ಧಿಸಲು ಮತ್ತು ಅಂತಿಮವಾಗಿ ಜಾಗತಿಕವಾಗಿ ಗುರುತಿಸಿಕೊಳ್ಳಲು ರಾಷ್ಟ್ರೀಯ ವೇದಿಕೆಯನ್ನು ಒದಗಿಸುತ್ತದೆ ಎಂದು ತಿಳಿಸಿದ್ದಾರೆ. ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಸಹಯೋಗದೊಂದಿಗೆ ನಡೆಯುತ್ತಿರುವ ಸ್ಪರ್ಧೆ ಭಾರತದ ಅತಿದೊಡ್ಡ ಮಾಧ್ಯಮ ಸಂವಹನ ವೇದಿಕೆಯಾದ ವಿಶ್ವ ಶ್ರವಣ-ದೃಶ ಮನೋರಂಜನಾ ಶೃಂಗಸಭೆ - ವೇವ್ಸ್‌ನ ಭಾಗವಾಗಿದೆ. ಮಾಧ್ಯಮ ಮತ್ತು ಮನರಂಜನೆ ವಲಯದ ಮೈಲಿಗಲ್ಲು ಕಾರ್ಯಕ್ರಮವಾದ ಮೊದಲ ವಿಶ್ವ ಶ್ರವಣ-ದೃಶ್ಯ ಮತ್ತು ಮನರಂಜನಾ ಶೃಂಗಸಭೆಯನ್ನು ಮೇ ೧ ರಿಂದ ೪, ರವರೆಗೆ ಮಹಾರಾಷ್ಟ್ರದ ಮುಂಬೈನಲ್ಲಿ ಆಯೋಜಿಸಲಾಗುತ್ತಿದೆ.

<><><><>

ರಾಜ್ಯದಲ್ಲಿ ನೀರಾವರಿ ಯೋಜನೆಗಳಿಂದಾಗಿ ಅನ್ನದಾತರ ಬಂಜರು ಜಮೀನು ಬಂಗಾರದ ಭೂಮಿಯಾಗಿ ಪರಿವರ್ತನೆಯಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ. ಬಿ. ಪಾಟೀಲ್ ತಿಳಿಸಿದ್ದಾರೆ. ವಿಜಯಪುರ ಜಿಲ್ಲೆಯ ತಿಕೋಟಾ ತಾಲೂಕಿನ ಮಲಕನ ದೇವರಹಟ್ಟಿಯ ಬಳಿ ಜಿನುಗು ಕೆರೆ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು ಈ ಜಿನುಗು ಕೆರೆ ೪.೭೩ ಚದುರ ಕಿಲೋಮೀಟರ್ ವ್ಯಾಪ್ತಿಯನ್ನು ಒಳಗೊಂಡಿದೆ.

<><><><>

ರಾಜ್ಯದಲ್ಲಿ ತುರ್ತು ಸಹಾಯವಾಣಿ ಕುರಿತು ಸಾರ್ವಜನಿಕರಲ್ಲಿ ಹೆಚ್ಚಿನ ಅರಿವು ಮೂಡಿಸುವ ಅಗತ್ಯವಿದೆ ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಹೇಳಿದ್ದಾರೆ. ಇಂದಿನಿಂದ ಮೂರು ದಿನಗಳ ಕಾಲ ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಂಡಿರುವ ಅವರು, ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ

ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತುರ್ತು ಸಹಾಯವಾಣಿಗಳ ಬಳಕೆ ಕುರಿತು ಜನರಲ್ಲಿ ಅರಿವಿನ ಕೊರತೆಯಿದೆ. ಈ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯಿಂದ ಶಾಲಾ-ಕಾಲೇಜುಗಳಲ್ಲಿ ಜಾಗೃತಿ ಮೂಡಿಸಬೇಕಾಗಿದೆ ಎಂದು ತಿಳಿದರು.

ಧ್ವನಿ : ನಾಗಲಕ್ಷ್ಮಿ ಚೌಧರಿ

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>